## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಪಿ.ಬಿ.ಕಟ್ಟಿ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ, ಮತ್ತು ಮತ್ತಿತರರ ವಿರುದ್ಧಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಜಿಎಂ/6358/2014/ಪಿಪಿ, ದಿನಾಂಕ:07.10.2016

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/6358/2014/ಪಿಪಿ, ದಿನಾಂಕ: 18.10.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ತೋಪಿನ ಕಟ್ಟೆ ಗ್ರಾಮದಲ್ಲಿ ಗೋರಾಲು ಮನೆಯಿಂದ ಮೌಳಿ (ಜನಕಟ್ಟೆ) ವರೆಗೆ ಸಾರ್ವಜನಿಕ ರಸ್ತೆ ಇದ್ದು, 2009 ರಿಂದ 2011 ನೇ ಸಾಲಿನಲ್ಲಿ ಕರ್ನಾಟಕ ಸರ್ಕಾರವು ನರೇಗಾ ಯೋಜನೆಯಡಿಯಲ್ಲಿ ಸದರಿ ರಸ್ತೆಯನ್ನು ಅಭಿವೃದ್ಧಿ ಪಡಿಸಲು ರೂ. 20.. ಲಕ್ಷವನ್ನು ಬಿಡುಗಡೆ ಮಾಡಿದ್ದು, ಇದುವರೆಗೂ ಅದನ್ನು ಸಂಪೂರ್ಣವಾಗಿ ಅಭಿವೃದ್ಧಿ ಗೊಳಿಸಿರುವುದಿಲ್ಲ. ಸದರಿ ರಸ್ತೆಯನ್ನು ಸ್ವಲ್ಪ ದೂರದವರೆಗೆ ಅಭಿವೃದ್ಧಿಪಡಿಸಲಾಗಿರುತ್ತದೆ. ಈಗ ಸದರಿ ರಸ್ತೆಯಲ್ಲಿ ಅಲ್ಲಲ್ಲಿ ಹಳ್ಳಗಳಿರುತ್ತವೆ. ಈ ವಿಚಾರದಲ್ಲಿ ಗ್ರಾಮ ಪಂಚಾಯತಿಗೆ ಅರ್ಜಿಯನ್ನು ಸಲ್ಲಿಸಿ, ಈ ರಸ್ತೆಯ ಬಗ್ಗೆ ಮಾಹಿತಿಯನ್ನು ನೀಡುವಂತೆ ಕೋರಿದ್ದರೂ ಎದುರುದಾರರಾದ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಯವರು ಮಾಹಿತಿಯನ್ನು ಒದಗಿಸಿರುವುದಿಲ್ಲ. ಈ ಬಗ್ಗೆ ಮಾಹಿತಿ ಹಕ್ಕು ಆಯೋಗದ ಮಾಹಿತಿ ಆಯುಕ್ತರ ನಿರ್ದೇಶನಪಿದ್ದರೂ ಮಾಹಿತಿಯನ್ನು ಒದಗಿಸಿರುವುದಿಲ್ಲ. ಆದ್ದರಿಂದ,

ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿ, ತೋಪಿನಕಟ್ಟಿ ಗ್ರಾಮದ ನಿವಾಸಿಯಾದ ಶ್ರೀ ಸುರೇಶ್ ಹನುಮಂತ ಕರಂಬಾಳ್ಕರ್, ಇವರು ಸಲ್ಲಿಸಿದ್ದ ದೂರಿನ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರನ್ವಯ ತನಿಖೆ ಕೈಗೆತ್ತಿಕೊಂಡು, ಲೋಕಾಯುಕ್ತ ಸಂಸ್ಥೆಯ ತಾಂತ್ರಿಕ ಕೋಶದ ಸಹಾಯಕ ಕಾರ್ಯಪಾಲಕ ಅಭಿಯಂತರರು-4 ಇವರಿಂದ ತನಿಖೆಯನ್ನು ನಡೆಸಿ ಪಡೆಯಲಾದ ವರದಿಯಲ್ಲಿ ದೂರುದಾರರು ತಮ್ಮ ಅರ್ಜಿಯಲ್ಲಿ ಮಾಡಿರುವ ಆರೋಪವು ಸಾಭೀತಾಗಿರುವುದಿಲ್ಲ, ಆದರೆ ದೂರುದಾರರು ಕೋರಿರುವಂತೆ, ದೂರಿನಲ್ಲಿ ಪ್ರಸ್ತಾಪಿಸಿರುವ ತೋಪಿನಕಟ್ಟಿ ಗ್ರಾಮ ಪಂಚಾಯತಿ ಅಡಿ ತೋಪಿನಕಟ್ಟಿ ಗೋರಲ್ ಮನೆಯಿಂದ ಮಾವುಲಿ ರೋಡ್ (ಜಿನಕಟ್ಟಿ) ಇದರ ಮಾಹಿತಿ ಬದಲು ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಪಿ.ಬಿ.ಕಟ್ಟಿ, ಇವರು ಲೋಕಾಯುಕ್ತ ಸಂಸ್ಥೆಗೆ ತಪ್ಪು ಮಾಹಿತಿಯನ್ನು ನೀಡಿರುವುದು ಹಾಗೂ ಸದರಿಯವರಿಗೆ ಸ್ಥಳ ತನಿಖೆಗೆ ಹಾಜರಾಗಲು ಪ್ರಕರಣದ ಎದುರುದಾರರಿಗೆ ಹಾಗೂ ಸದರಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಪಿ.ಬಿ.ಕಟ್ಟಿಯವರಿಗೆ ಪತ್ರ ಮುಖೇನ ತಿಳಿಸಿದ್ದರೂ, ಸದರಿಯವರು ಸಕಾರಣವಿಲ್ಲದೇ ಗೈರು ಹಾಜರಾಗಿರುತ್ತಾರೆಂದು ತನಿಖಾಧಿಕಾರಿಯವರು ತಿಳಿಸಿರುವುದ್ದರಿಂದ ಮತ್ತು ಸದರಿ ಕಾರ್ಯನಿರ್ವಾಹಕ ಅಧಿಕಾರಿಗಳ ಎರಡು ಪತ್ರಗಳನ್ನು ಹಾಜರುಪಡಿಸಿರುವ ಅವರ ಪತ್ರದ ಪ್ರತಿಯಿಂದ ಕಂಡು ಬರುತ್ತದೆ. ಆದ್ದರಿಂದ, ಎದುರುದಾರರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತೋಪಿನಕಟ್ಟಿ ಹಾಗೂ ಖಾನಾಪುರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ, ಇವರುಗಳು ತಪ್ಪು ಮಾಹಿತಿ ಮಾಡಿ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುವುದರಿಂದ, ಹಾಗೂ ಇವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು 1 ಮತ್ತು 2 ರವರಾದ ಶ್ರೀ ಯಶವಂತ ದೇಮಣ್ಣ ಗಾದಿ, ಕಾರ್ಯದರ್ಶಿ/ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತೋಪಿನ ಕಟ್ಟೆ ಗ್ರಾಮ ಪಂಚಾಯತಿ ಖಾನಾಪುರ ತಾಲ್ಲೂಕು ಮತ್ತು ಶ್ರೀ ಪಿ.ಬಿ.ಕಟ್ಟಿ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಸದರಿಯವರುಗಳ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 214 ವಿಸೇಬಿ 2016 ಬೆಂಗಳೂರು ದಿನಾಂಕ: 14-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

| ಕ್ರ.ಸಂಖ್ಯೆ: | ಅಧಿಕಾರಿಯ ಹೆಸರು ಮತ್ತು ಪದನಾಮ | ಎದುರುದಾರರ ಸಂಖ್ಯೆ: |
|---|---|---|
| 1 | ಶ್ರೀ ಯಶವಂತ ದೇಮಣ್ಣ ಗಾದಿ, ಕಾರ್ಯದರ್ಶಿ/ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತೋಪಿನ ಕಟ್ಟೆ ಗ್ರಾಮ ಪಂಚಾಯತಿ ಖಾನಾಪುರ ತಾಲ್ಲೂಕು | 1 |

| | | |
|---|---|---|
| 2 | ಶ್ರೀ ಪಿ.ಬಿ.ಕಟ್ಟಿ,<br>ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ | 2 |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

14/11/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ.
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.